**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ನ್ಯಾಯಾಲಯ, ಮುಳಬಾಗಿಲು**

**ಸಿಸಿ. ನಂಬರ್ 16/2024**

ಪ್ರಾ.ಸಾಃ **6**

ಚಾಸಾಃ **9**

**ದಿನಾಂಕಃ23.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**.

| | |
|---|---|
| ಹೆಸರು | : ಶ್ರೀ ನಂಜುಂಡಗೌಡ |
| ತಂದೆಯ ಹೆಸರು | : ಲೇಟ್ ನಾಚಪ್ಪ |
| ವಯಸ್ಸು | : 62 ವರ್ಷ |
| ಕೆಲಸ | : ನಿವೃತ್ತ ಪಿಎಸ್ ಐ |
| ವಾಸ ಸ್ಥಳ | : ಮುಳಬಾಗಿಲು |

**ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ**

ದಿಃ 20.04.2020 ರಿಂದ ದಿಃ 30.10.2023 ರವರೆಗೆ ನಂಗಲಿ ಠಾಣೆಯಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 03.01.2023 ರಂದು ಸಂಜೆ 7.30 ಗಂಟೆ ಸಮಯದಲ್ಲಿ ಚಾಸಾ 1 ರವರು ಠಾಣೆಗೆ ಹಾಜರಾಗಿದ ನೀಡಿದ ಬೆರಳಚ್ಚು ಮಾಡಿದ ದೂರನ್ನು ಪಡೆದು ಠಾಣಾ ಮೊ. ಸಂಖ್ಯೆ 04/2023 ರಲ್ಲಿ ಪ್ರಕರಣ ದಾಖಲಿಸಿ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೆನೆ. ಸಾಕ್ಷಿ ದೂರು ಮತ್ತು ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು ಸದರಿ ದೂರನ್ನು ಈಗಾಗಲೇ ನಿಪಿ 1 ಎಂದು ಗುರುತಿಸಲಾಗಿದ್ದು , ಸಾಕ್ಷಿಯ ಸಹಿಯನ್ನು ನಿಪಿ1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿಪಿ 9 ಎಂದು ಸಾಕ್ಷಿಯ ಸಹಿಯನ್ನು ನಿಪಿ9(ಎ) ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ 1 ರವರ ಮರು ಹೇಳಿಕೆ ಪಡೆದಿರುತ್ತೇನೆ. ದಿಃ 04.01.2023 ರಂದು ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿ ಪಂಚರಾದ ಚಾಸಾ4 ಮತ್ತು 5 ರವರ ಸಮಕ್ಷಮ ಬೆಳಿಗ್ಗೆ 9.00

ರಿಂದ 10.00 ರವರೆಗೆ ಮಹಜರ್ ಮಾಡಿ ಸ್ಥಳದಲ್ಲಿದ್ದ ಅಪಘಾತಕ್ಕೊಳಗಾದ ಎರಡು ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಮಹಜರ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ನಿಪಿ 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ2(ಬಿ) ಎಂದು ಗುರುತಿಸಲಾಯಿತು.

ದಿಃ 04.01.2023 ರಂದು ಚಾಸಾ 8 ರವರಿಗೆ ವಾಹನ ತಪಾಸಣೆ ಮಾಡಲು ಕೋರಿಕೆ ಸಲ್ಲಿಸಿರುತ್ತೇನೆ. ಅದೇ ದಿನ ಚಾಸಾ 8 ರವರು ನಂಗಲಿ ಠಾಣಾ ಆವರಣದಲ್ಲಿದ್ದ ವಾಹನವನ್ನು ತಪಾಸಣೆ ಮಾಡಿ ವರದಿ ನೀಡಿರುತ್ತಾರೆ. ಅದೇ ದಿನ ಎರಡೂ ವಾಹನಗಳನ್ನು ಅದರ ಮಾಲೀಕರಿಗೆ ಮುಚ್ಚಳಿಕೆ ಬರೆಸಿಕೊಂಡು ಬಿಡುಗಡೆ ಮಾಡಿರುತ್ತೇನೆ. ಸದರಿ ಮುಚ್ಚಳಿಕೆಯನ್ನು ಸಾಕ್ಷಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ 3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ3(ಬಿ) ಎಂದು ಗುರುತಿಸಲಾಯಿತು.

ದಿಃ 05.01.2023 ರಂದು ಆರೋಪಿ ಹಾಜರಾಗಿದ್ದು, ಆತನನ್ನು ದಸ್ತಗಿರಿ ಮಾಡಿ ಸೂಕ್ತ ಜಾಮೀನಿನ ಮೇರೆಗೆ ಬಿಡುಗಡೆ ಮಾಡಿರುತ್ತೇನೆ. ದಿಃ 31.01.2023 ರಂದು ಚಾಸಾ 2 ಮತ್ತು 3 ರವರ ಹೇಳಿಕೆ ಪಡೆದಿರುತ್ತೇನೆ. ದಿಃ 08.02.2023 ರಂದು ಗಾಯದ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಅದೇ ದಿನ ಸಾಕಷ್ಟು ಸಾಕ್ಷ್ಯಾದಾರಗಳು ಲಭ್ಯವಿದ್ದ ಕಾರಣ ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ ಎಲ್ ಎಂ ವಕೀಲರಿಂದಃ</u>**

ಮಹಜರ್ ಸಮಯದಲ್ಲಿ ಪಂಚನಾಮೆ ಸಾಕ್ಷಿದಾರರು, ಫಿರ್ಯಾದಿದಾರರು ಮತ್ತು ಸುತ್ತ ಮುತ್ತಲಿನ ಅಂಗಡಿಯವರು ಹಾಜರಿದ್ದರು. ನಾನು ಘಟನಾ ಸ್ಥಳಕ್ಕೆ ಹೋಗಿಲ್ಲ, ಠಾಣೆಯಲ್ಲೇ ಕುಳಿತು ಮಹಜರ್ ಅನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರ

ಹೇಳಿಕೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಎಲ್ಲಾ ದಾಖಲೆಗಳನ್ನು ಠಾಣೆಯಲ್ಲೇ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಫಿರ್ಯಾದುದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ. ಸ. ಇದೆ

ಸಹಿ/-

(ಶ್ರೀಮತಿ ರೋಹಿಣಿ. ಡಿ)

1 ನೇ ಅಪರ ಸಿ.ಜೆ ಮತ್ತು ಜೆಎಂಎಫ್ ಸಿ

ಮುಳಬಾಗಿಲು